**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ರವರು ನಿಯಮ-72 ರಡಿಯಲ್ಲಿ ನೀಡಿರುವ ಸೂಚನೆಗೆ ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಐಟಿ&ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಸಚಿವರ ಹೇಳಿಕೆ**

**ವಿಷಯ**

ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಖಾಲಿ ಇರುವ ಪ್ರಾಂಶುಪಾಲರ ಹುದ್ದೆಗಳನ್ನು ಭರ್ತಿ ಮಾಡದೆ ಇರುವುದರಿಂದ ಶೈಕ್ಷಣಿಕ ಗುಣಮಟ್ಟ ಕುಂಠಿತವಾಗುತ್ತಿರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು.

**ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಐಟಿ&ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಸಚಿವರ ಹೇಳಿಕೆ**

ತಾಂತ್ರಿಕ ಶಿಕ್ಷಣ ಇಲಾಖೆಯ ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಮಂಜೂರಾಗಿರುವ ಪ್ರಾಂಶುಪಾಲರ ಹುದ್ದೆಗಳ ವಿವರಗಳು ಈ ಕೆಳಕಂಡಂತಿವೆ.

| ವಿಭಾಗ | ಮಂಜೂರಾದ ಹುದ್ದೆ | ಭರ್ತಿಯಾದ ಹುದ್ದೆ | ಖಾಲಿ ಹುದ್ದೆ |
|---|---|---|---|
| ಇಂಜಿನಿಯರಿಂಗ್ ವಿಭಾಗ | 74 | 35 | 39 |
| ನಾನ್- ಇಂಜಿನಿಯರಿಂಗ್ ವಿಭಾಗ | 6 | 1 | 5 |
| ಗಣಿ ಶಿಕ್ಷಣ ಶಾಲೆ | 1 | 0 | 1 |
| ಒಟ್ಟು | 81 | 36 | 45 |

ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿನ ಪ್ರಾಂಶುಪಾಲರ ಹುದ್ದೆಯನ್ನು ಎ.ಐ.ಸಿ.ಟಿ.ಇ ನಿಯಮಗಳನ್ವಯ ಭರ್ತಿ ಮಾಡಬೇಕಾಗಿರುತ್ತದೆ. ಮಾರ್ಚ್ 2019 ರಂದು 07 ನೇ ಎ.ಐ.ಸಿ.ಟಿ.ಇ ನಿಯಮಗಳು ಜಾರಿಗೆ ಬಂದಿದ್ದು, ಸದರಿ ಎ.ಐ.ಸಿ.ಟಿ.ಇ ನಿಯಮಗಳನ್ವಯ ನೇಮಕಾತಿ ವಿಧಾನ, ವಿದ್ಯಾರ್ಹತೆ ಮತ್ತು ಸೇವಾ ಷರತ್ತುಗಳನ್ನು ವೃಂದ ಮತ್ತು ನೇಮಕಾತಿ ನಿಯಮಾವಳಿಗಳಲ್ಲಿ ಅಳವಡಿಸಿಕೊಂಡ ನಂತರ ಪ್ರಾಂಶುಪಾಲರ ಹುದ್ದೆಗಳನ್ನು ಭರ್ತಿ ಮಾಡಬೇಕಾಗಿರುತ್ತದೆ. ತಾಂತ್ರಿಕ ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ಮಾಡುವ ಪ್ರಕ್ರಿಯೆಯು ಚಾಲ್ತಿಯಲ್ಲಿದ್ದು, ವೃಂದ ಮತ್ತು ನೇಮಕಾತಿ ನಿಯಮಗಳು ಪರಿಷ್ಕರಣೆಯಾಗಿ ಜಾರಿಗೆ ಬಂದ ನಂತರ ಖಾಲಿಯಿರುವ ಪ್ರಾಂಶುಪಾಲರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಜರುಗಿಸಲಾಗುವುದು.

....2

ಮುಂದುವರೆದು, ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ಖಾಲಿಯಿರುವ ಪ್ರಾಂಶುಪಾಲರ ಹುದ್ದೆಯ ಕಾರ್ಯಭಾರವನ್ನು ಸಂಸ್ಥೆಯ ಶೈಕ್ಷಣಿಕ ಮತ್ತು ಆಡಳಿತ ಹಿತದೃಷ್ಟಿಯಿಂದ ಆಯಾ ಸಂಸ್ಥೆಯ ಹಿರಿಯ ಉಪನ್ಯಾಸಕರು ನಿರ್ವಹಿಸುತ್ತಿದ್ದು, ಸಂಸ್ಥೆಯ ಶೈಕ್ಷಣಿಕ ಗುಣಮಟ್ಟ ಕುಂಠಿತಗೊಂಡಿರುವುದಿಲ್ಲ.

ಇಡಿ 39 ಟಿಪಿಇ 2020.

(ಡಾ: ಅಶ್ವಥ್ ನಾರಾಯಣ ಸಿ.ಎನ್)
ಉಪ ಮುಖ್ಯಮಂತ್ರಿಗಳು
(ಉನ್ನತ ಶಿಕ್ಷಣ, ಐಟಿ&ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ,
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ)